ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ :– ಮಾನ್ಯ ಅಧ್ಯಕ್ಷರೆ, ವಿಧವಾ ವೇತನ ಪಡೆಯಲು ವಾರ್ಷಿಕ ಆದಾಯ 6 ಸಾವಿರ ರೂ.ಗಳನ್ನು ಮೀರಬಾರದು ಎಂದು ಇದೆ. ಸಂಧ್ಯಾ ಸುರಕ್ಷಾ ಯೋಜನೆ ಅಡಿಯಲ್ಲಿ ಫಲಾನುಭವಿಗಳಾಗಲು ವಾರ್ಷಿಕ ಆದಾಯ 20 ಸಾವಿರ ರೂ.ಗಳನ್ನು ಮೀರಬಾರದು ಎಂದು ಇದೆ. ವಿಧವಾ ವೇತನ ಪಡೆಯಲು ನಿಗದಿಪಡಿಸಿರುವ 6 ಸಾವಿರ ರೂ.ಗಳ ವಾರ್ಷಿಕ ಆದಾಯದ ಮಿತಿಯನ್ನು ಬದಲಾವಣೆ ಮಾಡಬೇಕೆಂದು ಆಗ್ರಹಿಸುತ್ತೇನೆ. ಈಗ ಉದ್ಯೋಗ ಖಾತ್ರಿ ಯೋಜನೆಯಲ್ಲಿ 100 ದಿವಸಗಳ ಕಾಲ ಕೆಲಸ ಮಾಡಿದರೆ, ಒಬ್ಬ ವ್ಯಕ್ತಿಗೆ 8,200 ರೂ.ಗಳ ವೇತನ ಸಿಗುತ್ತದೆ. ವಾರ್ಷಿಕ ಆದಾಯ ಮಿತಿಯನ್ನು 6 ಸಾವಿರ ರೂ.ಗಳಿಗೆ ನಿಗದಿಪಡಿಸಿರುವುದು ಅತಿ ಕಡಿಮೆ ಎನಿಸುತ್ತದೆ. ಆದ್ದರಿಂದ ದಯವಿಟ್ಟು ವಿಧವಾ ವೇತನ ಪಡೆಯಲು ಅರ್ಜಿ ಹಾಕುವವರಿಗೂ ಸಹ ವಾರ್ಷಿಕ ಆದಾಯ ಮಿತಿಯನ್ನು 20 ಸಾವಿರ ರೂ.ಗಳಿಗೆ ಏರಿಸಿದರೆ ಎಲ್ಲರಿಗೂ ಅನುಕೂಲವಾಗುತ್ತದೆ ಎಂದು ಭಾವಿಸುತೇನೆ. ಅದರ ಬಗ್ಗೆ ಮಾನ್ಯ ಸಚಿವರು ಪರಿಶೀಲಿಸಬೇಕೆಂದು ಕೋರುತ್ತೇನೆ.

ಶ್ರೀ ಜಿ.ಕರುಣಾಕರ ರೆಡ್ಡಿ :– ಮಾನ್ಯ ಅಧ್ಯಕ್ಷರೆ, ಮಾನ್ಯ ಸದಸ್ಯರು ವಾರ್ಷಿಕ ಆದಾಯದ ಮಿತಿ ಬಗ್ಗೆ ಇರುವ ವ್ಯತ್ಯಾಸದ ಬಗ್ಗೆ ಇಲ್ಲಿ ಪ್ರಸ್ತಾಪ ಮಾಡಿದ್ದಾರೆ. ಅದನ್ನು ನಾನು ಪರಿಶೀಲನೆ ಮಾಡುತ್ತೇನೆ. ಎಲ್ಲರಿಗೂ ಒಂದೇ ತರಹದ ವಾರ್ಷಿಕ ಆದಾಯ ಮಿತಿಯನ್ನು ನಿಗದಿಪಡಿಸಲು ಅಗತ್ಯ ಕ್ರಮಗಳನ್ನು ಜರುಗಿಸುತ್ತೇವೆಂದು ತಿಳಿಸಬಯಸುತ್ತೇನೆ.

ಅಧ್ಯಕ್ಷರು : ಈಗ ಪ್ರಶ್ನೋತ್ತರ ವೇಳೆ ಮುಗಿಯಿತು.

ಆ) <u>ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು</u>

ಶ್ರೀ ಸುರೇಶ್ ಕುಮಾರ್ [ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು] :– ಮಾನ್ಯ ಅಧ್ಯಕ್ಷರೆ, ದಿನಾಂಕ 13ನೇ ಜುಲೈ 2009ರಂದು 3ನೇ ಪಟ್ಟಿಯ ಲಿಖಿತ ಮೂಲಕ ಉತ್ತರಿಸುವ 71 ಪ್ರಶ್ನೆಗಳ ಪೈಕಿ 50 ಪ್ರಶ್ನೆಗಳ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು :– ಮಂಡಿಸಲಾಯಿತು.

(ಅನುಬಂಧ – I)

3. <u>ಕಾರ್ಯದರ್ಶಿಯವರ ವರದಿ</u>

ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿ